ಅಧ್ಯಕ್ಷರು: ಆಯಿತು. ಈಗ ನಿಮ್ಮ ಪ್ರಶ್ನೆಗೆ ತಕ್ಕ ಉತ್ತರ ಬಂದಿದೆಯಲ್ಲಾ?

ಶ್ರೀ ಕರಡಿ ಸಂಗಣ್ಣ ಅಮರಪ್ಪ: ಸಂಬಂಧಿಸಿದ ಪ್ರಶ್ನೆಗೆ ಅನುಗುಣವಾಗಿ ಉತ್ತರ ಕೇಳಲಿಕ್ಕೆ ಅವಕಾಶ ಇದೆ.

ಅಧ್ಯಕ್ಷರು: ಎಷ್ಟು ಪ್ರಶ್ನೆ ಕೇಳುವುದಕ್ಕೆ ಅವಕಾಶವಿದೆ? ಬೇರೆ ರೂಪದಲ್ಲಿ ತನ್ನಿ.

ಶ್ರೀ ಕರಡಿ ಸಂಗಣ್ಣ ಅಮರಪ್ಪ: ನಮ್ಮ ರಸ್ತೆಗಳಲ್ಲಿ ಹೋಗಲಿಕ್ಕೆ ಆಗುತ್ತಿಲ್ಲ. ಕೈಗಾರಿಕೆ ಸಚಿವರು ಒಂದು ಮೀಟಿಂಗ್ ಮಾಡಿ, ಅಲ್ಲಿ ಸಿಮೆಂಟ್, ಸ್ಟೀಲ್, ಸ್ಪಾಂಜ್ ಐರನ್ ಫ್ಯಾಕ್ಟರಿಗಳಿವೆ. ಆ ರಸ್ತೆಯಲ್ಲಿ ನಾವು ಸಂಚಾರ ಮಾಡಲಿಕ್ಕೆ ಆಗುತ್ತಿಲ್ಲ.

ಶ್ರೀ ಮುರುಗೇಶ್ ಆರ್. ನಿರಾಣಿ: ಸದಸ್ಯರ ಮಾತನ್ನು ಒಪ್ಪುತ್ತೇನೆ. ಕೊಪ್ಪಳ ಜಿಲ್ಲೆಗೆ ಹೋಗುತ್ತೇವೆ. ಆ ರೈತರ ಮನವೊಲಿಸಿ ಭೂಮಿಯನ್ನು ಕೊಡಿಸುವುದಾದರೆ ನಾವು ಬೇರೆ ಬೇರೆ ಕಡೆ ಕೈಗಾರಿಕೆಗಳು ಬಾರದಂತೆ ಒಂದೇ ಕಡೆ ಕೈಗಾರಿಕೆಗಳು ಬರುವಂತೆ ಮಾಡಲು ನಾವು ಪ್ರಯತ್ನ ಮಾಡುತ್ತೇವೆ.

ಅಧ್ಯಕ್ಷರು: ಸ್ಪಷ್ಟವಾಗಿ ಹೇಳಿದ್ದಾರೆ. ಮತ್ತೆ ಮತ್ತೆ ಕೇಳುತ್ತಾ ಹೋದರೆ ಹೇಗೆ?

ಶ್ರೀ ಕರಡಿ ಸಂಗಣ್ಣ ಅಮರಪ್ಪ: ಮಾನ್ಯ ಮಂತ್ರಿಗಳಲ್ಲಿ ವಿನಂತಿ ಏನೆಂದರೆ, ರಸ್ತೆ ಕಾಮಗಾರಿಯನ್ನು ಆದಷ್ಟು ಬೇಗ ಮಾಡಿಕೊಡಬೇಕೆಂದು ಒತ್ತಾಯ ಮಾಡುತ್ತೇವೆ.

ಶ್ರೀ ಮುರುಗೇಶ್ ನಿರಾಣಿ: ಆದ್ಯತೆ ಮೇರೆಗೆ ನಾವು ರಸ್ತೆ ಕಾಮಗಾರಿಗಳನ್ನು ಕೈಗೊಳ್ಳುತ್ತೇವೆ.

ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರು): ದಿನಾಂಕ 28.02.2011ರ 2ನೇ ಪಟ್ಟಿಯಿಂದ ಲಿಖಿತ ಮೂಲಕ ಉತ್ತರಿಸುವ 77 ಪ್ರಶ್ನೆಗಳ ಪೈಕಿ 62 ಪ್ರಶ್ನೆಗಳ ಉತ್ತರಗಳನ್ನು ಮಂಡಿಸುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು.